612

ಬೇಲೂರು ತಾಲ್ಲೂಕು.

ತಾರೀಖು 25ನೇ ಮಾರ್ಚ 1895ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಬೇಲೂರು ತಾಲ್ಲೂಕು ತಾಮತ್ತಿ ಗ್ರಾಮದಲ್ಲಿ ಇರುವ ಇದರಡಿ ನಮೂದ್ಮಾಡಿರುವ ಜಮೀನಿಗೆ ಕಾಫಿ ಸಾಗುವಳಿಬಗ್ಯಾಗಿ ದರಖಾಸ್ತು ಬಂದಿರೋಣದರಿಂದ ಸ್ಯ 1895ನೇ ಇಸವಿ ಜುಲೈ ತಾರೀಖು 26ನೇ ಶುಕ್ರವಾರ ಹಗಲು 11 ಘಂಟೆಗೆ ಹಾಸನ ಡೆಪ್ಯುಟಿ ಕಮ್ಮಿಷನರ್ ಸಾಹೆಬರವರ ಮಂಜೂರಾತಿಗೆ ವಳಪಡಿಸಿ ಬೇಲೂರು ತಾಲ್ಲೂಕು ಅಮಲ್ದಾರ್ರ ರೂಬರೂ ಬೇಲೂರು ತಾಲ್ಲೂಕು ಕಛೇರೀ ಮೊಕ್ಕಾಂನಲ್ಲಿ ಬಹಿರಂಗವಾದ ಹರಾಜು ಮೂಲಕ ಅವ್ರಿಗಳು ವಿಕ್ರಯಿಸಲ್ಪಡುವವು.

2. ಮಾಮೂಲ್ ಷರತ್ತುಗಳಿಗೆ ವಳಪಟ್ಟು ಬಹಿರಂಗವಾದ ಹರಾಜು ಮೂಲಕ ಸದರೀ ಲೀಲಾವ್ ನಡಿಯತಕ್ಕದ್ದು. ಎಕರೆ 1ಕ್ಕೆ 10 ರೂಪಾಯಿಗಳ ಮೇರೆ ಆಗುವ ಅಪ್ಸೆಟ್‌ಪ್ರೈಸ್ ಯಾನೆ ನಿಯಮವಾದ ಸರ್ಕಾರ್ ಸವಾಲಿಗೆ ಮೇಲ್ಪಟ್ಟು ಖಾಯಿಷ್ ಮಾಡುವ ಆಖ್ರೈರ್ ಚಡದರಖಾಸ್ತುದಾರನಿಗೆ ಮೂರು ವಾರಗಳಿಂದ ಜಮೀನ್ ಹರಾಜನ್ನ ಖೈದ್ ಮಾಡೋಣಾಗುತ್ತದೆ. ಹರಾಜಿನಲ್ಲಿ ಆ ಜಮೀನ್ ದರಖಾಸ್ತುದಾರನಿಗೆ ಆಗುವ ಪಕ್ಷದಲ್ಲಿ ಆತನಿಂದ ಹಾಜರಾಗಿರುವ ನಿಯಮವಾದ ಸರ್ಕಾರ್ ಸವಾಲ್ ಮೊಬಲಗು (ಅಪ್ಸೆಟ್‌ಪ್ರೈಸ್) ಪೈಕಿ ಯಾ ಚಿವಥಾ ಹಿಸ್ಸೇ ಡಿಪಾಜಿಟ್ ಮೊಬಲಗನ್ನ ಹರಾಜು ಮೊಬಲಗಿನ ಮೇಲೆ ಶೇಕಡಾ 25 ರೂಪಾಯಿಗಳ ಮೇರೆ ಆಗುವ ಡಿಪಾಜಿಟ್ ಮೊಬಲಗು ಭರ್ತಿಗೆ ಜಮಾ ಹಿಡಿಯೋಣಾಗುತ್ತೆ. ಆದರೆ ಆ ಜಮೀನನ್ನು ಹರಾಜಿನಲ್ಲಿ ದರಖಾಸ್ತುದಾರನಲ್ಲದ ಇತರರ್ಯಾರಾದರೂ ಪಡದರೆ ದರಖಾಸ್ತುದಾರನ ಷುರೂ ತೇವಣೀ ಮೊಬಲಗನ್ನು ವಾಪಸ್ ಮಾಡೋಣಾಗುತ್ತದೆ.

3. ಮೇಲ್ಕಂಡ ಅಪ್ಸೆಟ್‌ಪ್ರೈಸ್ ಯಾನೆ ನಿಯಮವಾದ ಸರಕಾರ್ ಸವಾಲ್ ಮೊಬಲಗಿನಲ್ಲಿ ಸರ್ವೇ ಖರ್ಚು ಮೊಬಲಗು ಮತ್ತು ಸರಕಾರಕ್ಕೇನೇ ಯಾವಾಗಲೂ ಇಟ್ಟುಕೊಳ್ಳಲ್ಪಟ್ಟಿರುವ ಸಂದಲ್ ವಿನಹ ಬಾಕಿಯಲ್ಲಾ ಮೆನ್ನಾಜಾತಿ ಮರಗಳ ಮೇಲಿನ ಸರಕಾರದ ಹಕ್ಕು ಇವುಗಳು ಅಡಗಿರುತ್ತವೆ.

4. ಹರಾಜು ಮೊಬಲಗು ಪೈಕಿ ಶೇಕಡಾ 25 ರೂಪಾಯಿಗಳ ಮೇರೆ ಆಗುವ ತೇವಣೀ ಮೊಬಲಗನ್ನು ಹರಾಜ್ ಖೈದಾದ ವಡನೆಯೇ 2ನೇ ಪ್ಯಾರಾದಲ್ಲಿ ನನೂದಾಗುವ ಸಂದರ್ಭಾನುಸಾರ ಷುರೂ ಡಿಪಾಜಿಟ್ ಮೊಬಲಗು ಭರ್ತಿಗೆ ವಳಪಟ್ಟು ಆಖ್ರೈರ್ ಚಡದರ ಖಾಸ್ತುದಾರ ಕೊಡತಕ್ಕದ್ದು. ಮತ್ತು ಬಾಕಿ ಹಣವನ್ನು ಜಾರಿಯಲ್ಲಿ ಇರುವ ನಿಬಂಧನೆಗಳಲ್ಲಿ ಯುಕ್ತವಾಗಿರುವಂತೆ ಹರಾಜಾದ ತಾರೀಖು ಲಾಗಾಯಿತು 15ನೇ ದಿವಸ ಸೂರ್ಯಾಸ್ತಮಯಕ್ಕೆ ಮುಂಚೆಯೇ ಆಖ್ರೈರ್ ಚಡದರಖಾಸ್ತುದಾರನು ಪಾವತಿ ಮಾಡತಕ್ಕದ್ದು. ಹಾಗೆ ಚಡದರಖಾಸ್ತುದಾರನ ಡಿಪಾಜಿಟ್ ಅಥವಾ ವಿಕ್ರಯದ ಬಾಕೀ ಮೊಬಲಗನ್ನು ಕೊಡದೆ ತಪ್ಪಿದರೆ ಅವನ ಖರ್ಚಿನಿಂದಲೂ ಅವನಿಗೆ ನಷ್ಟಕರವಾಗಿಯೂ ಸದರೀ ಜಮೀನ್ ಪುನಃ ಹರಾಜು ಮಾಡಲ್ಪಡುವದು. ಎರಡನೇ ಹರಾಜಿನಲ್ಲಿ ಸಂಭವಿಸುವ ನಷ್ಟಕ್ಕೆ ಅವನು ಗುರಿಯಾಗಿರಬೇಕು. ಆದರೆ ಜಾಸ್ತೀ ಏನಾದರೂ ಹುಟ್ಟಿದರೆ ಅದಕ್ಕೆ ಅವನಿಗೆ ಯಾವ ಹಕ್ಕೂ ಇರಲಾರದು.

5. ಈ ನಿಬಂಧನೆಗಳಿಗೆ ವಳಪಟ್ಟು ಹರಾಜಾದ ಜಮೀನನ್ನು ಷುರೂ ಮೂರು ಸಾಲ್ ಆಕಾರವಿಲ್ಲದೆ ಮುಫತ್ತಾಗಿ 4ನೇ 5ನೇ ಸಾಲ್ ಅರ್ಧ ಆಕಾರ 6ನೇ ಸಾಲ್ ಲಾಗಾಯತು ಮತ್ತು ಅನಂತರ ಸಹ ಪೂರಾ ಆಕಾರ ಈ ಮೇರೆ ಕೊಟ್ಟುಕೊಂಡು ಅನುಭವಿಸತಕ್ಕದ್ದು. ಈ ರಿಯಾಯತ್ ಕೊಡುವದಕ್ಕೆ ಮುಂಚೆ ಜಮೀನಿನಲ್ಲಿ ಇರುವ ಸಾಗುವಳಿ ಲಾಯಖ್ ಪ್ರದೇಶವನ್ನು ಸಾಗುವಳಿಗೆ ತರಲು ಪ್ರಾಮಾಣಿಕವಾದ ಪ್ರಯತ್ನ ಮಾಡದೆ ಅದರಲ್ಲಿ ಇರುವ ನಾಟುವನ್ನು ಕತರಾಯಿಸಿಕೊಂಡೇ ಆಗಲಿ ಅದರಲ್ಲಿ ಯಾವ ಭಾಗವನ್ನಾದರೂ ಸೈಲ್ ಮಾಡಿಯೇ ಆಗಲಿ ಸದರೀ ಜಮೀನಿಗೆ ರಿಯಾಯಿತಿಅವಧಿಯಲ್ಲಿ ರಾಜೀನಾಮೆ ಕೊಡುವ ಪಕ್ಷಕ್ಕೆ ಷುರೂ ಸಾಲ್ ಲಾಗಾಯತು ಪೂರಾ ಆಕಾರ ಕೊಡಲುಳ್ಳವನೆಂತ ಬರಹ ಮೂಲಕವಾಗಿ ಹರಾಜು ದಾರನು ಮುಚ್ಚಳಿಕೆಯಿಂದ ಬದ್ಧನಾಗಬೇಕು.

ಸರ್ವೇ ನಂಬರ್.	ದರಖಾಸ್ತುದಾರನ ಹೆಸರು.	ಜಮೀನ್ ಹೆಸರು ಮತ್ತು ಇರತಕ್ಕ ಸ್ಥಳ.	ಚತುರ್ಗಡಿ.	ದರಖಾಸ್ತು ಜಮೀನಿನ್ಸ್		ಷರಾ.
				ಎಕ್ರೆ.	ಗುಂಟೆ.	
135	ಅಂಣಿಗವ್ವಡ ..	ಬಿಕ್ಕೋಡು ಹೋಬಳಿ ತಾಮತ್ತಿ	..	12	34	
136	ಡಿಟೋ ..	ಡಿಟೋ		14	29	
137	ಡಿಟೋ ..	ಡಿಟೋ		17	27	
138	ಡಿಟೋ ..	ಡಿಟೋ		13	13	

ತಿಳುವಳಿಕೆ ಷರಾ,—ಬಂದು ಸರ್ವೇ ನಂಬರು ಪೈಕಿ ಕೆಲವು ಜಾಗಾಕ್ಕೆ ದರಖಾಸ್ತು ಬಂದು ಕಬ್ಜಾ ಆಗತೇ ಪ್ರಕಾರ ಅಂದಾಜಾ ಎಕರೆ ಮೇಲೆ ಅಪ್ಸೆಟ್‌ಪ್ರೈಸ್ ವಸೂಲಾದ್ದರಲ್ಲಿ ಕರಾರುವಾಕಾ ಮೋಜಣೀ ಎಕರಿಗೆ ಗಣನೀಯವಾದಷ್ಟು ಕಮ್ಮಿಜಾಸ್ತೀ ಆದರೆ ಜಾಸ್ತೀ ಎಕರೆ ಸಂಬಂಧ ಅಪ್ಸೆಟ್‌ಪ್ರೈಸ್ ವಸೂಲೀ ಕೊಡುವದಕ್ಕೇ ಆಗಲಿ ಕಮ್ಮಿ ಎಕರೆ ಸಂಬಂಧ ವಾಪಸ್ ಪಡೆಯುವದಕ್ಕೇ ಆಗಲಿ ಜಮೀನ್ ಹಿಡುವಳಿದಾರನು ಬದ್ಧವಾಗಿರಬೇಕು.

ಪಿ. ಎಸ್. ಪೂರ್ಣಯ್ಯ,
ಡೆಪ್ಯುಟಿ ಕಮ್ಮಿಷನರ್.